ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂ: ತಾಂ.ಶಿ.ಇ 01 ಸಿಡಿಸಿ 2023(ಕ.ನಂ.1029891)

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ
ಭವನ,
ಅರಮನೆ ರಸ್ತೆ, ಬೆಂಗಳೂರು-560001.
ದಿನಾಂಕ: 09/05/2024.

**-:ಸುತ್ತೋಲೆ:-**

ವಿಷಯ:- ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಚಾರ್ಯರು ಮತ್ತು ಬೋಧಕರು ಇಲಾಖೆ ವತಿಯಿಂದ ನಡೆಸುವ AROHAN-2024 ಕಾರ್ಯಕ್ರಮದಲ್ಲಿ ಭಾಗವಹಿಸುವ ಬಗ್ಗೆ.

ಉಲ್ಲೇಖ:- ಈ ಕಚೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ: 07.02.2024 & 19.02.2024

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸುತ್ತೋಲೆಗಳನ್ವಯ ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ರವರ ನಿರ್ದೇಶನದನ್ವಯ ಆಯೋಜಿಸಲಾಗುತಿರುವ AROHAN-2024 ಆನ್ ಲೈನ್ ಉಪನ್ಯಾಸ ಸಂಕೀರ್ಣ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಲು ರಾಜ್ಯದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಚಾರ್ಯರು ಮತ್ತು ಬೋಧಕರುಗಳಿಗೆ ತಿಳಿಸಲಾಗಿತ್ತು.

ವಿವಿಧ ಸಂಸ್ಥೆಗಳಲ್ಲಿರುವ ಬೋಧಕರು ಶೈಕ್ಷಣಿಕ ಕ್ಷೇತ್ರದಲ್ಲಿ ಮಾಡಿರುವ ನವೀನ ಉಪಕ್ರಮಗಳು, ಅತ್ಯುತ್ತಮ ಅಭ್ಯಾಸಗಳನ್ನು ರಾಜ್ಯದ ಎಲ್ಲಾ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕರುಗಳಿಗೆ ತಲುಪಿಸಿ ಮತ್ತು ಅರಿವು ಮೂಡಿಸುವುದಾಗಿದ್ದು, ಇದರಿಂದಾಗಿ ಪ್ರತಿ ಬೋಧಕರು ತಮ್ಮ ತಮ್ಮ ಸಂಸ್ಥೆಗಳಲ್ಲಿ ಅವುಗಳನ್ನು ಅಳವಡಿಸಿಕೊಂಡು, ತಮ್ಮ ಸಂಸ್ಥೆಯಲ್ಲಿನ ಶೈಕ್ಷಣಿಕ ವಾತಾವರಣವನ್ನು ಉನ್ನತೀಕರಿಸಲು ಮತ್ತು ಉತ್ತೇಜಿಸಲು AROHAN-2024 ಕಾರ್ಯಕ್ರಮದ ಉದ್ದೇಶವಾಗಿರುತ್ತದೆ. ಆದಾಗ್ಯೂ ಮಾಸಿಕ ಎರಡು ಬಾರಿ ನಡೆಯುವ ಸದರಿ ಆನ್ ಲೈನ್ ಕಾರ್ಯಕ್ರಮದಲ್ಲಿ ಭಾಗವಹಿಸಿರುವ ಸಂಖ್ಯೆ ಗಣನೀಯವಾಗಿ ಕಡಿಮೆ ಇರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ.

ಆದ್ದರಿಂದ ಪ್ರತಿ ತಿಂಗಳು ಎರಡು ಬಾರಿ ಆಯೋಜಿಸುವ AROHAN-2024 ಕಾರ್ಯಕ್ರಮದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಚಾರ್ಯರುಗಳು ಬೋಧಕರುಗಳು ಮತ್ತು ಆಸಕ್ತ ವಿದ್ಯಾರ್ಥಿಗಳು ಕಡ್ಡಾಯವಾಗಿ ಮತ್ತು ಸಕ್ರಿಯವಾಗಿ ಭಾಗವಹಿಸಲು ಕ್ರಮ ವಹಿಸುವಂತೆ ಮತ್ತು ಸಂಸ್ಥೆಗಳ ಪ್ರಾಚಾರ್ಯರುಗಳು AROHAN-2024 ಕಾರ್ಯಕ್ರಮದಲ್ಲಿ ಸಂಸ್ಥೆಯ ವತಿಯಿಂದ ಭಾಗವಹಿಸುವ ಎಲ್ಲಾ ಬೋಧಕರು/ಆಸಕ್ತ ವಿದ್ಯಾರ್ಥಿಗಳ ಮಾಹಿತಿಯ ದಾಖಲಾತಿಗಳನ್ನು ಸಂಸ್ಥೆಯಲ್ಲಿ ಕ್ರೋಢೀಕರಿಸಲು ಸೂಚಿಸಲಾಗಿದೆ.

Signed by
Prasanna H
Date: 13-05-2024 16:20:31

ನಿರ್ದೇಶಕರು

ಇವರಿಗೆ:

ರಾಜ್ಯದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ ಮತ್ತು ಬೋಧಕರುಗಳಿಗೆ: ಸೂಕ್ತ ಕ್ರಮಕ್ಕಾಗಿ.

ಪ್ರತಿ:

1. ಮಾನ್ಯ ಆಯುಕ್ತರ ಆಪ್ತ ಶಾಖೆ:- ಮಾಹಿತಿಗಾಗಿ.
2. ಮಾನ್ಯ ನಿರ್ದೇಶಕರ ಆಪ್ತ ಶಾಖೆ:- ಮಾಹಿತಿಗಾಗಿ.
3. ಕಡತಕ್ಕೆ